JUNE 11, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಷ್ಟ್ರೀಯ ಮಾನಸಿಕ ಆರೋಗ್ಯ** ಮತ್ತು ನರ ವಿಜ್ಞಾನಗಳ ಸಂಸ್ಥೆ– ನಿಮ್ಹಾನ್ಸ್, ಬೆಂಗಳೂರು ವತಿಯಿಂದ, ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ಹಾಗೂ ತುಮಕೂರು ಜಿಲ್ಲೆ ತುರುವೆಕೆರೆಯಲ್ಲಿ, ಮಾನಸಿಕ ಆರೋಗ್ಯಕ್ಕಾಗಿ 'ಯೋಗ ಕೇಂದ್ರಿತ ವಿಸ್ತರಣಾ ಸೇವೆ '–ಯೆಸ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಈ ಕಾರ್ಯಕ್ರಮದ ಮೂಲಕ ಒಟ್ಟು ಮೂರು ವರ್ಷಗಳ ಅವಧಿಯಲ್ಲಿ, 200 ಜನ ಮಾನಸಿಕ ಅಸ್ವಸ್ಥರಿಗೆ, ಯೋಗಾಭ್ಯಾಸ ನೀಡಿ, ಮಾನಸಿಕ ಆರೋಗ್ಯದ ಚಿಕಿತ್ಸೆ ಹಾಗೂ ಪ್ರಗತಿ ಕುರಿತು ಅಧ್ಯಯನ ನಡೆಸಲಾಗುತ್ತದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ 'ಯೆಸ್' ಕಾರ್ಯಕ್ರಮದ ಮುಖ್ಯ ಅಧಿಕಾರಿ ಹಾಗೂ ಪ್ರಾಚಾರ್ಯರಾದ ಡಾಕ್ಟರ ಆರತಿ ಜಗನ್ನಾಥನ್....

<><><>

**ಧ್ವನಿ: ಡಾಕ್ಟರ ಆರತಿ ಜಗನ್ನಾಥನ್ 38 ಸೆಕೆಂದುಗಳು**

<><><>

**ಕ್ಯಾನ್ಸರ್ ರೋಗಿಗಳಿಗೆ ಗುಣಮಟ್ಟದ** ಚಿಕಿತ್ಸೆ ನೀಡುವ ಉದ್ದೇಶದಿಂದ, ಕಲ್ಯಾಣ ಕರ್ನಾಟಕದ ಕಲಬುರಗಿಯಲ್ಲಿ, 210 ಹಾಸಿಗೆಗಳ ಪೆರಿಫೆರಲ್ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣಗೊಳ್ಳುತ್ತಿದ್ದು, ಮೂರು ತಿಂಗಳ ಒಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ವಿಧಾನ ಪರಿಷತ್ತು ಭರವಸೆಗಳ ಸಮಿತಿ, ಅಧ್ಯಕ್ಷ ಶರವಣ ಟಿ.ಎ ಹೇಳಿದರು.

ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಕರ್ನಾಟಕ ವಿಧಾನ ಪರಿಷತ್ತು ಭರವಸೆಗಳ ಸಮಿತಿ, ವೈದ್ಯಕೀಯ ಶಿಕ್ಷಣ ಇಲಾಖೆಗಳ ಜಂಟಿ ಸಭೆ ನಡೆಸಿ ಮಾತನಾಡಿದ ಅವರು, ಬಡವರು, ಆರ್ಥಿಕವಾಗಿ ಹಿಂದುಳಿದವರು, ಬಿ.ಪಿ.ಎಲ್. ಕಾರ್ಡದಾರ ಕ್ಯಾನ್ಸರ್ ರೋಗಿಗಳಿಗೆ ಗುಣಮಟ್ಟದ ಹಾಗೂ ಅಗ್ಗದ ಚಿಕಿತ್ಸೆ ನೀಡಲು ಈ ಆಸ್ಪತ್ರೆ ಸಹಕಾರಿಯಾಗಲಿದೆ ಎಂದರು.

<><><>

**ಗದಗ ಜಿಲ್ಲೆಯಲ್ಲಿ ಕರ ವಸೂಲಾತಿ** ಪ್ರಕ್ರಿಯೆ ಮಂದಗತಿಯಲ್ಲಿದ್ದು, ಪ್ರತಿ ತಿಂಗಳು ಶೇಕಡ 10 ರ ಷ್ಟ ಗುರಿ ನಿಗದಿಪಡಿಸಿಕೊಂಡು, ಪ್ರಗತಿ ಸಾಧಿಸಬೇಕು ಎಂದು ಗದಗ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್. ಎಸ್, ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ, ಸಭಾಂಗಣದಲ್ಲಿ ಜರುಗಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಮಹಿಳಾ ಗ್ರಾಮ ಸಭೆಗಳನ್ನು ಆಯೋಜಿಸಬೇಕು. ಎಂದರು.

<><><>

**ಚಿಕ್ಕಬಳ್ಳಾಪುರ ಜಿಲ್ಲೆಯ,** ಪ್ರಸಿದ್ಧ ಪ್ರವಾಸಿ ತಾಣ ನಂದಿಗಿರಿಧಾಮದಲ್ಲಿ, 19 ನೇ ತಾರೀಖು ಆಯೋಜಿತ, ರಾಜ್ಯ ಸಚಿವ ಸಂಪುಟ ಸಭೆ ಹಿನ್ನೆಲೆ, 16 ರ ಸಂಜೆ 6 ಗಂಟೆಯಿಂದ, 20 ರ ಬೆಳಗ್ಗೆ 5 ಗಂಟೆಯವರೆಗೆ, ನಂದಿಗಿರಿಧಾಮಕ್ಕೆ ಪ್ರವಾಸಿಗರ ಪ್ರವೇಶಕ್ಕೆ ನಿರ್ಭಂದ ವಿಧಿಸಲಾಗಿದೆ ಹಾಗೂ ಗಿರಿಧಾಮದಲ್ಲಿ ವಸತಿ ಕೊಠಡಿಗಳ ಮುಂಗಡ ಕಾಯ್ದಿರಿಸುವಿಕೆಯನ್ನು ನಿ ೀಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

<><><>

**ಉತ್ತರ ಕರ್ನಾಟಕ ಭಾಗದ** ವಿವಿಧೆಡೆಗಳಲ್ಲಿ ಇಂದು ಕಾರ ಹುಣ್ಣಿಮೆ ಯನ್ನು ಸಂಭ್ರಮದಿಂದ ಆಚರಿಸಲಾಯಿತು. ಕೃಷಿ ಸಂಸ್ಕೃತಿಯ ಭಾಗವಾಗಿರುವ ಎತ್ತುಗಳನ್ನು ಸಿಂಗರಿಸಿ, ಪೂಜಿಸಲಾಯಿತು. ಧಾರವಾಡ ಜಿಲ್ಲೆ ಕುಂದಗೋಳದಲ್ಲಿ ಕಾರ ಹುಣ್ಣಿಮೆ ಪ್ರಯುಕ್ತ ಕರಿಬಂಡಿ ಉತ್ಸವ ಜರುಗಿತು.

<><><>

**ಶಿವಮೊಗ್ಗ ಜಿಲ್ಲಾಡಳಿತ, ಕಾ**ರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸೇರಿದಂತೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ, ನಾಳೆ ಬೆಳಗ್ಗೆ, ನಗರದ ಶಿವಪ್ಪ ನಾಯಕ ವೃತ್ತದಲ್ಲಿ "ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ" ಹಿನ್ನೆಲೆ, ಸ್ಥಬ್ಧ ಚಿತ್ರ ಪ್ರದರ್ಶನ ಹಾಗೂ ಕರಪತ್ರಗಳ ಮೂಲಕ ಕಾನೂನು ಅರಿವು ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ.

<><><>

**ಧಾರವಾಡ ಜಿಲ್ಲೆಯ,** ವಿವಿಧ ತಾಲೂಕು ಕೇಂದ್ರಗಳು, ಸಾರ್ವಜನಿಕ ಪ್ರದೇಶಗಳು ಹಾಗೂ ಕೊಳಗೇರಿಗಳಲ್ಲಿ, ನಾಳೆ ಬಾಲಕಾರ್ಮಿಕ ದಿನಾಚರಣೆ ವಿರೋಧಿ ಹಿನ್ನೆಲೆ, ಜಾಗ್ರತಿ ಜಾಥಾ ಆಯೋಜಿಸುವಂತೆ ಜಿಲ್ಲಾಧಿಕಾರಿ ದಿವ್ಯಾ ಪ್ರಭು, ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ವಿಧಾನ ಪರಿಷತ್ತು ಮಾಜಿ ಹಂಗಾಮಿ** ಸಭಾಪತಿ, ಯಾದಗಿರಿ ಜಿಲ್ಲೆ, ಮಲ್ಹಾರ ಗ್ರಾಮದ, ಡೇವಿಡ್ ಸಿಮಿಯೋನ್ ಬೆಂಗಳೂರಿನಲ್ಲಿ ನಿಧನರಾದರು, ಅವರಿಗೆ 75 ವರ್ಷ ವಯಸ್ಸಾಗಿತ್ತು. 1996 ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿದ್ದ ಅವರು, ಉಪ ಸಭಾಪತಿ ಹಾಗೂ ಹಂಗಾಮಿ ಸಭಾಪತಿಯಾಗಿ ಸೇವೆ ಸಲ್ಲಿಸಿದ್ದರು. ಡೇವಿಡ್ ಸಿಮಿಯೋನ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು ಕಂಬನಿ ಮಿಡಿದಿದ್ದು ಸಂತಾಪ ಸೂಚಿಸಿದ್ದಾರೆ.

<><><>

**ಹವಾಮಾನ ಇಲಾಖೆ** ಮುನ್ಸೂಚನೆಯಂತೆ, ನಾಳೆಯಿಂದ ಮೂರು ದಿನಗಳ ಕಾಲ ಉತ್ತರ ಕನ್ನಡ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಗುಡುಗು ಸಹಿತ ಗಾಳಿ, ಮಳೆಯಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ.

<><><>

**ಹಾಸನ ಜಿಲ್ಲೆಯ ವಿವಿಧೆಡೆಗಳಲ್ಲಿ, ಇಂದಿನಿಂದ** 3 ದಿನಗಳಲ್ಲಿ ಗುಡುಗು ಸಿಡಿಲಿನೊಂದಿಗೆ ಗಾಳಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>